895

Ros/10/2018 PGS

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಡೀಮ್ಡ್ ವಿಶ್ವವಿದ್ಯಾಲಯದಲ್ಲಿ ಎಂಬಿಬಿಎಸ್ ವ್ಯಾಸಂಗ ಮಾಡಿ ಗೃಹವೈದ್ಯ ತರಬೇತಿಯನ್ನು ಹೊರರಾಜ್ಯ & ಹೊರದೇಶಗಳಲ್ಲಿ ಪೂರೈಸುತ್ತಿರುವ ಅಭ್ಯರ್ಥಿಗಳಿಗೆ ದಂಡ ವಿಧಿಸುವ ಬಗ್ಗೆ.

---***---

**ಓದಲಾಗಿದೆ:**

ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರ ದಿ: 24-04-2018 ರ ಪತ್ರ ಸಂಖ್ಯೆ: ವೈಶಿನಿ/ಪಿಜಿಎಸ್/03/2018-19.

**ಪ್ರಸ್ತಾವನೆ:**

ಕರ್ನಾಟಕ ರಾಜ್ಯದ ಡೀಮ್ಡ್ ವಿಶ್ವವಿದ್ಯಾಲಯಗಳ ಪೈಕಿ ಕೆ.ಎಂ.ಸಿ-ಮಣಿಪಾಲ್, ಕೆ.ಎಂ.ಸಿ-ಮಂಗಳೂರು, ಬಿ.ಎಲ್.ಡಿ.ಇ-ಬಿಜಾಪುರ, ಕೆ.ಎಲ್.ಇ-ಬೆಳಗಾವಿ ಹಾಗೂ ಇತರೆ ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಎಂ.ಬಿ.ಬಿ.ಎಸ್ ವ್ಯಾಸಂಗ ಮಾಡಿ ಗೃಹವೈದ್ಯ ತರಬೇತಿಗಳನ್ನು ಹೊರರಾಜ್ಯಗಳಲ್ಲಿ ಮತ್ತು ಹೊರದೇಶಗಳಲ್ಲಿ ಪೂರೈಸಿಕೊಂಡು ಬಂದ ನಂತರ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದಿಂದ ನಿರಾಕ್ಷೇಪಣಾ ಪತ್ರವನ್ನು ನೀಡುವಂತೆ ಕೋರುತ್ತಿದ್ದಾರೆ.

ಆದರೆ ಪ್ರಸ್ತುತ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದಿಂದ ನಿರಾಕ್ಷೇಪಣಾ ಪತ್ರವನ್ನು ಗೃಹವೈದ್ಯ ತರಬೇತಿ ಪೂರ್ವದಲ್ಲಿ ಪಡೆಯುವ ಅಭ್ಯರ್ಥಿಗಳಿಗೆ ರಾಜ್ಯದೊಳಗಡೆ ಸದರಿ ತರಬೇತಿಗೆ ರೂ. 5,000/- ನಿಗದಿತ ಶುಲ್ಕವಾಗಿ ಪಡೆಯಲಾಗುತ್ತಿದೆ. ಹೊರ ದೇಶಗಳಲ್ಲಿ ಎಂ.ಬಿ.ಬಿ.ಎಸ್ ಅನ್ನು ಪೂರೈಸಿ ರಾಜ್ಯದೊಳಗೆ ಸದರಿ ತರಬೇತಿಯನ್ನು ಪಡೆಯಲು ರೂ. 25,000/- ನಿಗದಿತ ಶುಲ್ಕವಾಗಿ ಪಡೆಯಲಾಗುತ್ತಿದೆ. ರಾಜ್ಯದಲ್ಲಿ ಡೀಮ್ಡ್ ವೈದ್ಯಕೀಯ ಕಾಲೇಜುಗಳಲ್ಲಿ ಎಂ.ಬಿ.ಬಿ.ಎಸ್ ಅನ್ನು ಪೂರೈಸಿ ಈ ನಿರ್ದೇಶನಾಲಯದಿಂದ ನಿರಾಪೇಕ್ಷಣಾ ಪತ್ರವನ್ನು ಪಡೆಯದೆ ಹೊರರಾಜ್ಯಗಳಲ್ಲಿ ಗೃಹವೈದ್ಯ ತರಬೇತಿಯನ್ನು ಪೂರೈಸಿಕೊಂಡ ನಂತರ ಈ ನಿರ್ದೇಶನಾಲಯದಲ್ಲಿ ನಿರಾಕ್ಷೇಪಣಾ ಪತ್ರವನ್ನು ಪಡೆಯಲು ಬರುವ ಅಭ್ಯರ್ಥಿಗಳಿಂದ ರೂ. 10.000/- ಗಳ ಶುಲ್ಕವನ್ನು ಪಡೆಯಲಾಗುತ್ತಿದೆ.

ಇದರಿಂದಾಗಿ ಕೆ.ಎಂ.ಸಿ-ಮಣಿಪಾಲ್, ಕೆ.ಎಂ.ಸಿ-ಮಂಗಳೂರು ಮತ್ತು ಕೆ.ಎಲ್.ಇ-ಬೆಳಗಾವಿಯ ವಿದ್ಯಾರ್ಥಿಗಳು ಈ ರೀತಿಯಾಗಿ ಗೃಹವೈದ್ಯ ತರಬೇತಿಯನ್ನು ಪಡೆದ ನಂತರ ಬಂದು ನಿರಾಕ್ಷೇಪಣಾ ಪತ್ರಕ್ಕಾಗಿ ಅರ್ಜಿಯನ್ನು ಸಲ್ಲಿಸುತ್ತಿದ್ದು, ಈ ರೀತಿಯ ನಿಯಮ ಉಲ್ಲಂಘನೆ ಮಾಡುವ ವಿದ್ಯಾರ್ಥಿಗಳಿಗೆ ದಂಡದ ಮೊತ್ತವನ್ನು ಕನಿಷ್ಠ ರೂ. 50,000/- ಗಳನ್ನು ನಿಗದಿಪಡಿಸಿದ್ದಲ್ಲಿ, ನಿಯಮ ಉಲ್ಲಂಘನೆಯನ್ನು ತಡೆಯಬಹುದಾಗಿರುತ್ತದೆ.

ಆದ ಕಾರಣ ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಎಂ.ಬಿ.ಬಿ.ಎಸ್ ವ್ಯಾಸಂಗ ಮಾಡಿ ಗೃಹವೈದ್ಯ ತರಬೇತಿಗಳನ್ನು ಹೊರರಾಜ್ಯಗಳಲ್ಲಿ ಪೂರೈಸಿಕೊಂಡು ಬಂದ ನಂತರ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದಿಂದ ನಿರಾಕ್ಷೇಪಣಾ ಪತ್ರವನ್ನು ಕೋರುವ ವಿದ್ಯಾರ್ಥಿಗಳ ಸಂಖ್ಯೆಯನ್ನು ನಿಯಂತ್ರಿಸಲು ಸದರಿ ದಂಡವನ್ನು ನಿಗದಿಪಡಿಸುವುದು ಅನಿವಾರ್ಯವೆಂಬ ಅಂಶವನ್ನು ಅವಗಾಹನೆಗೆ ತರುತ್ತಾ, ಈ ಬಗ್ಗೆ ಸೂಕ್ತ ಸರ್ಕಾರಿ ಆದೇಶವನ್ನು ಹೊರಡಿಸುವಂತೆ ವೈದ್ಯಕೀಯ ಶಿಕ್ಷಣ ನಿರ್ದೇಶಕರು ಮೇಲೆ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಆದ್ದರಿಂದ ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಎಂ.ಬಿ.ಬಿ.ಎಸ್ ವ್ಯಾಸಂಗ ಮಾಡಿ ಗೃಹವೈದ್ಯ ತರಬೇತಿಗಳನ್ನು ಹೊರರಾಜ್ಯ & ಹೊರದೇಶಗಳಲ್ಲಿ ಪೂರೈಸಿಕೊಂಡು ಬಂದ ನಂತರ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದಿಂದ ನಿರಾಕ್ಷೇಪಣಾ ಪತ್ರವನ್ನು ಕೋರುವ ವಿದ್ಯಾರ್ಥಿಗಳ ಸಂಖ್ಯೆಯನ್ನು ನಿಯಂತ್ರಿಸಲು

ಪ್ರಸ್ತುತ ಪಡೆಯುತ್ತಿರುವ ಶುಲ್ಕದ ಜೊತೆಗೆ ಹೆಚ್ಚುವರಿಯಾಗಿ ರೂ. 50,000/- ಗಳನ್ನು ದಂಡದ ಮೊತ್ತವನ್ನಾಗಿ ನಿಗದಿಪಡಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಗಿನಂತೆ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 156 ಆರ್‌ಜಿಯು 2018, ಬೆಂಗಳೂರು, ದಿ: 20-09-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಎಂ.ಬಿ.ಬಿ.ಎಸ್ ವ್ಯಾಸಂಗ ಮಾಡಿ ಗೃಹವೈದ್ಯ ತರಬೇತಿಗಳನ್ನು ಹೊರರಾಜ್ಯ & ಹೊರದೇಶಗಳಲ್ಲಿ ಪೂರೈಸಿಕೊಂಡು ಬಂದ ನಂತರ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದಿಂದ ನಿರಾಕ್ಷೇಪಣಾ ಪತ್ರವನ್ನು ಕೋರುವ ವಿದ್ಯಾರ್ಥಿಗಳಿಗೆ ಪ್ರಸ್ತುತ ಪಡೆಯುತ್ತಿರುವ ಶುಲ್ಕದ ಜೊತೆಗೆ ಹೆಚ್ಚುವರಿಯಾಗಿ ರೂ. 50,000/- ಗಳನ್ನು ದಂಡದ ಮೊತ್ತವನ್ನಾಗಿ ನಿಗದಿಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

K. Murali 20/09/18

(ಕೆ. ಮುರಳಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ವೈದ್ಯಕೀಯ ಶಿಕ್ಷಣ)

20.09.18

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು - ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 25 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

**ಪ್ರತಿ ಮಾಹಿತಿಗಾಗಿ:**

1) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560009.
2) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ ಬ್ಲಾಕ್, ಜಯನಗರ, ಬೆಂಗಳೂರು-560041.
3) ರಿಜಿಸ್ಟ್ರಾರ್, ಕರ್ನಾಟಕ ವೈದ್ಯಕೀಯ ಪರಿಷತ್ತು, #16/6, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-560052.
4) ರಾಜ್ಯದ ಎಲ್ಲಾ ಡೀಮ್ಡ್ ವಿಶ್ವವಿದ್ಯಾಲಯಗಳಿಗೆ - ವೈದ್ಯಕೀಯ ಶಿಕ್ಷಣ ನಿರ್ದೇಶಕರ ಮುಖಾಂತರ.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು.
6) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.